ಕರ್ನಾಟಕ ಸರಕಾರ
ಪ್ರವಾಸೋದ್ಯಮ ಇಲಾಖೆ
ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು
ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ, ಉಡುಪಿ ಜಿಲ್ಲೆ, ಉಡುಪಿ.

Website: www.udupitourism.com E.mail:tourismdeptudupi2012@gmail.com
Fax:0820-2574994 Telephone No.: 0820-2574868

ಸಂಖ್ಯೆ:ಪ್ರಇ/ಪ್ರ.ಟ್ಯಾ/ಅರ್ಜಿ ಆಹ್ವಾನ/2016-17 ದಿನಾಂಕ: 08-11-2016

# ಪ್ರಕಟಣೆ

ವಿಷಯ: 2016-17ನೇ ಸಾಲಿನಲ್ಲಿ ಹಿಂದುಳಿದ ಹಾಗೂ ಅಲ್ಪಸಂಖ್ಯಾತ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ಸಹಾಯಧನದೊಂದಿಗೆ ಪ್ರವಾಸಿ ಟ್ಯಾಕ್ಸಿಗಳನ್ನು ಒದಗಿಸಲು ಅರ್ಜಿ ಆಹ್ವಾನ ಮಾಡಿರುವ ಬಗ್ಗೆ.

ಉಲ್ಲೇಖ: 1. ಸರಕಾರದ ಆದೇಶ ಸಂ:ಪ್ರ.ಇ/297/ಪ್ರವಾಯೋ/2016 ದಿನಾಂಕ: 02-11-2016
2. ಕೇಂದ್ರ ಕಛೇರಿ ಪತ್ರ ಸಂ:ಪ್ರ.ಇ/ಯೋ-1/5/2016-17 ದಿನಾಂಕ: 02-11-2016

* * * * * *

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ 2016-17ನೇ ಸಾಲಿನಲ್ಲಿ ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತ ವರ್ಗಕ್ಕೆ ಸೇರಿದ 36 ಅಭ್ಯರ್ಥಿಗಳಿಗೆ ಸ್ವಯಂ ಉದ್ಯೋಗ ಕಲ್ಪಿಸಿಕೊಳ್ಳಲು ತಲಾ ರೂ.2.00 ಲಕ್ಷಗಳ ಸಹಾಯಧನದೊಂದಿಗೆ ಪ್ರವಾಸಿ ಟ್ಯಾಕ್ಸಿ ಒದಗಿಸಲು ಉಲ್ಲೇಖ(1)ರ ಆದೇಶದಲ್ಲಿ ಸರಕಾರ ಅನುಮೋದನೆ ನೀಡಿ ಅನುದಾನ ಬಿಡುಗೆ ಮಾಡಿರುತ್ತದೆ.

<u>ವಾಹನ ಘಟಕ ವೆಚ್ಚದ ವಿವರ ಈ ಕೆಳಕಂಡಂತಿದೆ.</u>

1. ಪ್ರವಾಸಿ ಟ್ಯಾಕ್ಸಿಗೆ ತಗಲುವ ಒಟ್ಟು ವೆಚ್ಚದಲ್ಲಿ ರೂ.2.00 ಲಕ್ಷಗಳು ಇಲಾಖೆಯ ಸಹಾಯಧನ.
2. ವಾಹನದ ಒಟ್ಟು ವೆಚ್ಚದ ಶೇ.5ರಷ್ಟು ಫಲಾನುಭವಿಯ ವಂತಿಗೆ.
3. ಉಳಿದ ಮೊತ್ತ ಬ್ಯಾಂಕ್ ಸಾಲ.

ಅದರಂತೆ ಜಿಲ್ಲೆಯಲ್ಲಿ ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ವರ್ಗಕ್ಕೆ ಸೇರಿದ ಒಟ್ಟು 36 ಅಭ್ಯರ್ಥಿಗಳಿಗೆ ಸಹಾಯಧನದೊಂದಿಗೆ ಪ್ರವಾಸಿ ಟ್ಯಾಕ್ಸಿ ಒದಗಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ ಮಾಡಲಾಗಿದೆ.

| ಕ್ರ.ಸಂ. | ಪ್ರಕ್ರಿಯೆ | ದಿನಾಂಕ |
|---|---|---|
| 1 | ಅರ್ಜಿ ಆಹ್ವಾನಿಸಲು ಪತ್ರಿಕಾ ಪ್ರಕಟಣೆ ಹೊರಡಿಸಿದ ದಿನಾಂಕ | 08-11-2016 |
| 2 | ಅರ್ಜಿ ವಿತರಣೆ ಹಾಗೂ ಸ್ವೀಕರಿಸುವ ದಿನಾಂಕ | 08-11-2016 ರಿಂದ 17-12-2016 ರ ವರೆಗೆ |
| 3 | ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಣೆ ಹಾಗೂ ಆಕ್ಷೇಪಣೆ ಆಹ್ವಾನ | 27-01-2016 ರಿಂದ 06-02-2017 ರ ಒಳಗಾಗಿ |
| 4 | ಅಂತಿಮ ಫಲಾನುಭವಿಗಳ ಆಯ್ಕೆ ಪಟ್ಟಿ ಪ್ರಕಟಣೆ | 18-02-2017 ರಿಂದ 24-02-2017 ರ ಒಳಗಾಗಿ |

ಭರ್ತಿ ಮಾಡಿದ ಅರ್ಜಿಗಳನ್ನು ದ್ವಿಪ್ರತಿಯಲ್ಲಿ ಎಲ್ಲಾ ಅಗತ್ಯ ಪ್ರಮಾಣ ಪತ್ರಗಳ ಪ್ರತಿಗಳೊಂದಿಗೆ ನಿಗದಿತ ದಿನಾಂಕದಂದು ಸಂಜೆ 5:00 ಗಂಟೆ ಒಳಗಾಗಿ ಕೆಳಗಿನ ವಿಳಾಸಕ್ಕೆ ಸಲ್ಲಿಸಬಹುದು.

ಅರ್ಜಿ ಸಲ್ಲಿಸಬೇಕಾದ ವಿಳಾಸ: ಸಹಾಯಕ ನಿರ್ದೇಶಕರು
ಪ್ರವಾಸೋದ್ಯಮ ಇಲಾಖೆ
ರಜತಾದ್ರಿ, 'ಎ' ಬ್ಲಾಕ್, 2ನೇ ಮಹಡಿ
ಮಣಿಪಾಲ - ಉಡುಪಿ ಜಿಲ್ಲೆ

..2

**<u>ಅರ್ಜಿದಾರರು ಹೊಂದಿರಬೇಕಾದ ಅರ್ಹತೆಗಳು:</u>**

ಸಹಾಯಧನದೊಂದಿಗೆ ಪ್ರವಾಸಿ ಟ್ಯಾಕ್ಸಿ ಖರೀದಿಸುವ ಯೋಜನೆಯ ಪ್ರಯೋಜನ ಪಡೆಯಲು ಅರ್ಜಿ ಸಲ್ಲಿಸಲು ಅರ್ಜಿದಾರರು ಈ ಕೆಳಕಂಡ ಅರ್ಹತೆಗಳನ್ನು ಹೊಂದಿರಬೇಕು.

1. ಅರ್ಜಿದಾರರು ಹಿಂದುಳಿದ ಅಥವಾ ಅಲ್ಪಸಂಖ್ಯಾತ ವರ್ಗಕ್ಕೆ ಸೇರಿದವರಾಗಿರಬೇಕು.
2. ಅರ್ಜಿದಾರನ ವಯಸ್ಸು 20 ರಿಂದ 40 ವರ್ಷದೊಳಗಿರಬೇಕು.
3. ಅರ್ಜಿದಾರರು 10ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು.
4. ಅಭ್ಯರ್ಥಿಗಳು ಲಘು ವಾಹನ ಚಾಲನಾ ಪರವಾನಗಿ ಪಡೆದು ಕನಿಷ್ಠ ಒಂದು ವರ್ಷವಾಗಿರಬೇಕು. ಅಭ್ಯರ್ಥಿಗಳು ವಾಹನ ಚಾಲನಾ ಪರವಾನಗಿಯೊಂದಿಗೆ ಬ್ಯಾಡ್ಜ್ ಹೊಂದಿರತಕ್ಕದ್ದು.
5. ನಗರ ಪ್ರದೇಶದ ಫಲಾನುಭವಿಗಳ ವಾರ್ಷಿಕ ಆದಾಯ ರೂ.55,000/- ಗಳು ಮೀರಬಾರದು.
6. ಗ್ರಾಮಾಂತರ ಪ್ರದೇಶದ ಫಲಾನುಭವಿಗಳ ವಾರ್ಷಿಕ ಆದಾಯ ರೂ.40,000/- ಗಳು ಮೀರಬಾರದು.
7. ಅರ್ಜಿದಾರರು ಯಾವ ಜಿಲ್ಲೆಯ ನಿವಾಸಿಯಾಗಿರುತ್ತಾರೋ ಅದೇ ಜಿಲ್ಲೆಯಲ್ಲಿ ಅರ್ಜಿ ಸಲ್ಲಿಸಬೇಕು.
8. ಅರ್ಜಿದಾರನು ಯಾವುದೇ ಸರ್ಕಾರಿ ಇಲಾಖೆಯಲ್ಲಿ ಅಥವಾ ನಿಗಮ ಮಂಡಳಿಗಳಲ್ಲಿ ಖಾಯಂ ನೌಕರಿಯಲ್ಲಿರಬಾರದು.
9. ಈಗಾಗಲೇ ಕುಟುಂಬದ ಸದಸ್ಯನೊಬ್ಬನು ಇಲಾಖೆಯಿಂದ ಪ್ರವಾಸಿ ಟ್ಯಾಕ್ಸಿ ಪಡದಿದ್ದರೆ ಅದೇ ಕುಟುಂಬದ ಮತ್ತೊಬ್ಬ ಸದಸ್ಯನಿಗೆ ಈ ಅವಕಾಶ ಇರುವುದಿಲ್ಲ. ಕುಟುಂಬದ ಸದಸ್ಯನು ವಿವಾಹವಾಗಿ ಪ್ರತ್ಯೇಕವಾಗಿ ವಾಸವಿದ್ದಲ್ಲಿ, ಅರ್ಜಿ ಸಲ್ಲಿಸಲು ಅವಕಾಶ ಇರುತ್ತದೆ.

**<u>ಅರ್ಜಿದಾರರು ಸಲ್ಲಿಸಬೇಕಾದ ದಾಖಲೆಗಳು.</u>**

1. ಜಿಲ್ಲಾಧಿಕಾರಿಗಳಿಂದ ಜಾಹೀರಾತು ಪ್ರಕಟಣೆಗೊಂಡ 30 ದಿನಗಳ ಒಳಗಾಗಿ ನಿಗದಿಪಡಿಸಿದ ಅರ್ಜಿ ನಮೂನೆಯನ್ನು ಭರ್ತಿ ಮಾಡಿ ಇತ್ತೀಚಿನ ಭಾವಚಿತ್ರದೊಂದಿಗೆ ದ್ವಿಪ್ರತಿಯಲ್ಲಿ ಸಲ್ಲಿಸಬೇಕು.
2. ಪಡಿತರ ಚೀಟಿ/ಚುನಾವಣಾ ಗುರುತು ಚೀಟಿ/ಆಧಾರ್ ಕಾರ್ಡ್ ಪ್ರತಿಗಳನ್ನು ಸಲ್ಲಿಸುವುದು ಕಡ್ಡಾಯವಾಗಿರುತ್ತದೆ.
3. ಹಿಂದುಳಿದ ಅಥವಾ ಅಲ್ಪಸಂಖ್ಯಾತ ವರ್ಗಕ್ಕೆ ಸೇರಿರುವ ಬಗ್ಗೆ ತಹಶೀಲ್ದಾರರಿಂದ ಪಡೆದುಕೊಂಡಿರುವ ಚಾಲ್ತಿಯಲ್ಲಿರುವ ಜಾತಿ ಪ್ರಮಾಣ ಪತ್ರದ ಪ್ರತಿ.
4. ತಹಶೀಲ್ದಾರರಿದ ಪಡೆದುಕೊಂಡಿರುವ ಚಾಲ್ತಿಯಲ್ಲಿರುವ ಆದಾಯ ಪ್ರಮಾಣ ಪತ್ರದ ಪ್ರತಿ.
5. ತಹಶೀಲ್ದಾರ್/ನಗರ ಸಭೆ/ಪುರಸಭೆ/ಗ್ರಾಮ ಪಂಚಾಯ್ತಿ/ಪಟ್ಟಣ ಪಂಚಾಯ್ತಿ-ಗಳಿಂದ ಪಡೆದಿರುವ ವಾಸಸ್ಥಳ ದೃಢೀಕರಣ ಪತ್ರದ ಪ್ರತಿ.
6. ಖಾಯಂ ಲಘು ವಾಹನ ಚಾಲನಾ ಪರವಾನಗಿ ಪತ್ರ ಹಾಗೂ ಆರ್.ಟಿ.ಓ. ರವರಿಂದ ಪಡೆದಿರುವ ಡಿ.ಎಲ್. ಎಕ್ಸ್‌ಟ್ರಾಕ್ಟ್‌ಗಳನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು.
7. ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ/ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಈ ರೀತಿಯ ಸೌಲಭ್ಯ ಪಡೆಯದೇ ಇರುವ ಬಗ್ಗೆ ಸಂಬಂಧಿಸಿದ ಅಧಿಕಾರಿಗಳಿಂದ ದೃಢೀಕರಣ ಪತ್ರ.
8. ಅಭ್ಯರ್ಥಿಯ ಕುಟುಂಬದಲ್ಲಿ ಯಾವ ಒಬ್ಬ ಸದಸ್ಯನು ಸರ್ಕಾರಿ ನೌಕರಿ ಹೊಂದಿಲ್ಲದ ಬಗ್ಗೆ ನಗರಸಭೆ/ಪುರಸಭೆ/ಗ್ರಾಮ ಪಂಚಾಯ್ತಿ/ಪಟ್ಟಣ ಪಂಚಾಯ್ತಿ ಅಧಿಕಾರಿಗಳಿಂದ ಪಡೆದ ದೃಢೀಕರಣ ಪತ್ರವನ್ನು ಸಲ್ಲಿಸುವುದು.
9. ಅರ್ಜಿದಾರರು ಯಾವುದೇ ಸರ್ಕಾರಿ ಇಲಾಖೆಗಳಲ್ಲಿ ಅಥವಾ ನಿಗಮ ಮಂಡಳಿಗಳಲ್ಲಿ ಖಾಯಂ ನೌಕರಿಯಲ್ಲಿರದಬಗ್ಗೆ,ತಹಶೀಲ್ದಾರ್/ನಗರಸಭೆ/ಪುರಸಭೆ/ಗ್ರಾಮ ಪಂಚಾಯ್ತಿ/ಪಟ್ಟಣ ಪಂಚಾಯ್ತಿ-ಗಳಿಂದ ದೃಢೀಕರಣ ಪತ್ರದ ಪ್ರತಿ.
10. ಅರ್ಜಿದಾರನು ಯಾವುದೇ ಸರ್ಕಾರಿ ಇಲಾಖೆಯಲ್ಲಿ ಅಥವಾ ನಿಗಮ ಮಂಡಳಿಗಳಲ್ಲಿ ಖಾಯಂ ನೌಕರಿಯಲ್ಲಿರದ ಬಗ್ಗೆ, ಅಭ್ಯರ್ಥಿಯ ಕುಟುಂಬದಲ್ಲಿ ಯಾವ ಒಬ್ಬ ಸದಸ್ಯನು ಸರ್ಕಾರಿ ನೌಕರಿ ಹೊಂದಿಲ್ಲದ ಬಗ್ಗೆ, ಕುಟುಂಬದ ಯಾವ ಸದಸ್ಯನು ಪ್ರವಾಸೋದ್ಯಮ ಇಲಾಖೆಯಿಂದ ಪ್ರವಾಸಿ ಟ್ಯಾಕ್ಸಿ ಪಡೆದಿಲ್ಲ ಎಂಬ ಬಗ್ಗೆ ಹಾಗೂ ಸ್ವಯಂ ಪ್ರಮಾಣೀಕರಿಸಿ, ರೂ.50/-ರ ಬೆಲೆಯ ಛಾಪಾ ಕಾಗದ (Affidavit) ದಲ್ಲಿ ನಮೂನೆ-3 ರಲ್ಲಿ ಪ್ರಮಾಣ ಪತ್ರವನ್ನು ಪಡೆಯತಕ್ಕದ್ದು.

11. ಅರ್ಜಿಯಲ್ಲಿ ಅಭ್ಯರ್ಥಿಗಳ ದೂರವಾಣಿ ಸಂಖ್ಯೆಗಳನ್ನು ನಮೂದಿಸುವುದು ಖಡ್ಡಾಯ.
12. ಅಭ್ಯರ್ಥಿಗಳ ವಿರುದ್ಧ ಯಾವುದೇ ಕ್ರಿಮಿನಲ್ ಮೊಕದ್ದಮೆ ಇಲ್ಲದೇ ಇರುವ ಬಗ್ಗೆ ಆಯಾ ವ್ಯಾಪ್ತಿಯ ಪೊಲೀಸ್ ಠಾಣೆಯಿಂದ ಪೊಲೀಸ್ ನಿರಾಕ್ಷೇಪಣಾ ಪತ್ರ ಪಡೆದು ಸಲ್ಲಿಸುವುದು.
13. ಅರ್ಜಿದಾರನು ಮೇಲಿನ ಎಲ್ಲಾ ದಾಖಲಾತಿಗಳನ್ನು ಸ್ವಯಂ ದೃಢೀಕರಿಸಿ ಸಲ್ಲಿಸತಕ್ಕದ್ದು.
14. ಅಭ್ಯರ್ಥಿಯು ಅರ್ಜಿಗಳನ್ನು ಸೀಲ್ ಮಾಡಿದ ಲಕೋಟೆಯಲ್ಲಿ ಸಲ್ಲಿಸಬೇಕು.

**ಷರತ್ತುಗಳು:**

1. ಫಲಾನುಭವಿಯೇ ಸ್ವತಃ ಟ್ಯಾಕ್ಸಿಯನ್ನು ಚಲಾಯಿಸಬೇಕು ಹೊರತು ಬೇರೆಯವರಿಗೆ ಪರಬಾರೆ ಮಾಡುವಂತಿಲ್ಲ. ಒಂದು ವೇಳೆ ಪರಭಾರೆ ಮಾಡಿರುವುದು ಕಂಡುಬಂದಲ್ಲಿ ಟ್ಯಾಕ್ಸಿಯನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು. ಸದರಿ ವಾಹನವನ್ನು (05)ವರ್ಷಗಳವರೆಗೆ ಬೇರೆಯವರಿಗೆ ವರ್ಗಾವಣೆ/ಮಾರಾಟ/ಪರಬಾರೆ/ಬಾಡಿಗೆಗೆ/ಸ್ವಂತದವರಿಗೆ ನೀಡುವಂತಿಲ್ಲ.
2. ಪ್ರತಿ ವರ್ಷ ಫಲಾನುಭವಿಯು ಗಳಿಸಿದ ಆದಾಯದ ವಿವರಗಳನ್ನು ಜಿಲ್ಲಾ ಮಟ್ಟದ ಇಲಾಖೆಯ ಕಛೇರಿಗೆ ನೀಡುವುದು.
3. ಫಲಾನುಭವಿಯು ತೆಗೆದುಕೊಳ್ಳುವ ಬ್ಯಾಂಕಿನ ಸಾಲದ ಮೊತ್ತವನ್ನು ನಿರಂತರವಾಗಿ ಮರುಪಾವತಿ ಮಾಡುವುದು.
4. ಫಲಾನುಭವಿಗಳಿಗೆ ವಿತರಿಸುವ ಪ್ರವಾಸಿ ಟ್ಯಾಕ್ಸಿಯನ್ನು ಸಾಲ ಮಂಜೂರಾತಿ ಮಾಡಿದ ಬ್ಯಾಂಕ್ ಹೆಸರಿಗೆ ಅಡಮಾನಿಕೆ (Hypothecation) ಮಾಡಿಕೊಳ್ಳತಕ್ಕದ್ದು. ಈ ಬಗ್ಗೆ ಸಂಬಂಧಪಟ್ಟ ಅಧೀನ ಕಛೇರಿಯ ಪ್ರವಾಸೋದ್ಯಮ ಇಲಾಖೆಯ ಅಧಿಕಾರಿಗಳು ಅಗತ್ಯ ಕ್ರಮ ವಹಿಸತಕ್ಕದ್ದು.
5. ಫಲಾನುಭವಿಗಳು ಪ್ರವಾಸಿಗರೊಡನೆ ಉತ್ತಮ ನಡವಳಿಕೆಯಿಂದ ವರ್ತಿಸುವುದು. ಇಂಗ್ಲೀಷ್ ಹಾಗೂ ಕನ್ನಡ ಭಾಷೆ ಇತರೆ ಭಾಷೆಗಳ ಪರಿಣಿತಿ, ಪ್ರವಾಸಿ ಸ್ಥಳಗಳ ಪರಿಚಯ ಮುಂತಾದ ವಿಷಯಗಳ ಬಗ್ಗೆ ಸಾಮಾನ್ಯ ಜ್ಞಾನ ಹೊಂದಿರಬೇಕು.

ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು
ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ
ಉಡುಪಿ ಜಿಲ್ಲೆ.

ಪ್ರತಿ:

1. ಕಛೇರಿ ಪ್ರತಿ